# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **2010-11 ರಿಂದ 2013-14ನೇ** ಸಾಲಿನವರೆಗೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬಿಡುಗಡೆಯಾದ ಕೇಂದ್ರ ಹಾಗೂ ರಾಜ್ಯ ಸಹಾಯಧನ **ರೂ.176.012ಲಕ್ಷ** ದುರುಪಯೋಗವಾಗಿರುವ ಬಗ್ಗೆ ತನಿಖೆ ನಡೆಸಿ ವರದಿಯನ್ನು ನೀಡುವ ಕುರಿತು.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವವಮೊಗ್ಗ ರವರ ಅ.ಸ.ಪತ್ರ ಸಂಖ್ಯೆ: ಜಿಪಂಶಿ/ಅಭಿ(7) ರಾಜೈಅಯೋ/ಸ.ಧನ/ ಕೇ.ರಾ.ಮಂ/14-15/15-16 ದಿನಾಂಕ 01.08.2015 & 31.07.2015

## ಪ್ರಸ್ತಾವನೆ :

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರು **2010-11 ರಿಂದ 2013-14ನೇ** ಸಾಲಿನವರೆಗೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬಿಡುಗಡೆಯಾದ ಕೇಂದ್ರ ಹಾಗೂ ರಾಜ್ಯ ಸಹಾಯಧನ **ರೂ.176.012ಲಕ್ಷ** ದುರುಪಯೋಗವಾಗಿರುವ ಕುರಿತು ಸಮಗ್ರ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಆದೇಶ ನೀಡುವಂತೆ ಮೇಲೆ ಓದಲಾದ ಪತ್ರದಲ್ಲಿ ಕೋರಿರುವುದನ್ನು ಪರಿಗಣಿಸಿ, **2010-11** ರಿಂದ **2013-14ನೇ** ಸಾಲಿನವರೆಗೆ ಕಾರ್ಯಕ್ರಮದಡಿ ಬಿಡುಗಡೆಯಾದ ಕೇಂದ್ರ ಹಾಗೂ ರಾಜ್ಯ ಸಹಾಯಧನ ದುರುಪಯೋಗವಾಗಿರುವ ಕುರಿತು ತನಿಖಾ ವರದಿ ನೀಡುವ ಕುರಿತು **04** ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡ ರಚಿಸಿ, ಸಮಗ್ರ ತನಿಖೆ ನಡೆಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/75/ಜೈಅಯೋ/2015, ಬೆಂಗಳೂರು, ದಿನಾಂಕ 28.09.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ 2010-11 ರಿಂದ 2013-14ನೇ ಸಾಲಿನವರೆಗೆ ಕಾರ್ಯಕ್ರಮದಡಿ ಬಿಡುಗಡೆಯಾದ ಕೇಂದ್ರ ಹಾಗೂ ರಾಜ್ಯ ಸಹಾಯಧನ ದುರುಪಯೋಗವಾಗಿರುವ ಕುರಿತು ವರದಿ ನೀಡುವ ಕುರಿತು ಈ ಕೆಳಕಂಡ 04 ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡವನ್ನು ರಚಿಸಿ ಆದೇಶಿಸಿದೆ.

| ಕ್ರ.ಸಂ | ಅಧಿಕಾರಿ ಹೆಸರು ಮತ್ತು ಹುದ್ದೆಯ ವಿವರ |
|---|---|
| 1 | ಶ್ರೀ ಎನ್. ಕೃಷ್ಣಪ್ಪ,<br>ನಿರ್ದೇಶಕರು(ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಅಪ ಇಲಾಖೆ |
| 2 | ಶ್ರೀ ಜಿ.ಗೋವಿಂದಸ್ವಾಮಿ,<br>ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾವೇರಿ |
| 3 | ಡಾ: ಸಿದ್ಧರಾಮಣ್ಣ,<br>ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ |
| 4 | ಶ್ರೀ ಮಂಜುನಾಥ,<br>ಸಂಯೋಜಕರು, ಸಾಮಾಜಿಕ ಪರಿಶೋಧನೆ, MGNREGA ಕೊಳಚೆ ನಿರ್ಮೂಲನಾ ಮಂಡಳಿ, ಬೆಂಗಳೂರು-9 |

ಮೇಲೆ ರಚಿಸಲಾದ ತನಿಖಾ ತಂಡವು **ರೂ.176.012 ಲಕ್ಷ** ಕೇಂದ್ರ ಹಾಗೂ ರಾಜ್ಯ ಸಹಾಯಧನ ದುರುಪಯೋಗವಾಗಿರುವ ಕುರಿತು ಸಮಗ್ರ ತನಿಖೆ ನಡೆಸಿ, ಎರಡು ವಾರದೊಳಗೆ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2)ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ, ಹಾವೇರಿ, ಮತ್ತು ಚಿಕ್ಕಬಳ್ಳಾಪುರ.
4. ಶ್ರೀ ಎನ್. ಕೃಷ್ಣಪ್ಪ, ನಿರ್ದೇಶಕರು(ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಅಪ ಇಲಾಖೆ
5. ಶ್ರೀ ಜಿ.ಗೋವಿಂದಸ್ವಾಮಿ, ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾವೇರಿ
6. ಡಾ: ಸಿದ್ದರಾಮಣ್ಣ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ
7. ಶ್ರೀ ಮಂಜುನಾಥ, ಸಂಯೋಜಕರು, ಸಾಮಾಜಿಕ ಪರಿಶೋಧನೆ, MGNREGA, ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿ ರಸ್ತೆ, ಬೆಂಗಳೂರು-9
8. ನಿರ್ದೇಶಕರು, ಸಾಮಾಜಿಕ ಪರಿಶೋದನೆ, MGNREGA, ಕೊಳಚೆ ನಿರ್ಮೂಲನಾ ಮಂಡಳಿ, ಶೇಷಾದ್ರಿ ರಸ್ತೆ, ಬೆಂಗಳೂರು-9

**ಪ್ರತಿಯನ್ನು :**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು ರವರು ಮಾನ್ಯ ಗ್ರಾಅಪ ಸಚಿವರ ಅವಗಾಹನೆಗೆ ತರುವಂತೆ ಕೋರಿ ಕಳುಹಿಸಿದೆ.
2. ಸರ್ಕಾರದ ಪ್ರದಾನ ಕಾರ್ಯದರ್ಶಿಯವರು / ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.